ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಪಕ್ರನಿ/2020-21 ದಿನಾಂಕ: 25-02-2021

**ಸುತ್ತೋಲೆ**

ವಿಷಯ : 2021ರ ದ್ವಿತೀಯ ಪಿಯುಸಿ ವಾರ್ಷಿಕ ಮತ್ತು ಪೂರಕ ಪರೀಕ್ಷೆಗೆ ಹಾಜರಾಗುವ ಹೊಸಬರು, ಪುನರಾವರ್ತಿತ ಮತ್ತು ಖಾಸಗಿ ಅಭ್ಯರ್ಥಿಗಳಿಗೆ ಪಠ್ಯವಸ್ತು ನಿಗಧಿ ಪಡಿಸಿರುವ ಕುರಿತು.

ಉಲ್ಲೇಖ :ಸುತ್ತೋಲೆ ಸಂಖ್ಯೆ:ಪಪೂಶಿ/ಶೈಶಾ/ಪವಕ/2020-21, ದಿ:21-10-2020.

******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ದೇಶ ಹಾಗೂ ರಾಜ್ಯದಲ್ಲಿ ಲಾಕ್‌ಡೌನ್ ಜಾರಿಯಲ್ಲಿ ಇದ್ದುದರಿಂದ 2020-21ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ನಿಗಧಿತ ಅವಧಿಯೊಳಗೆ ಪ್ರಾರಂಭ ಮಾಡಲು ಸಾಧ್ಯವಾಗದ ಕಾರಣ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿಯುಸಿಗೆ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಪಠ್ಯವಸ್ತುವಿನಲ್ಲಿ ಶೇಕಡಾ 30ರಷ್ಟು ಪಠ್ಯವಸ್ತುವನ್ನು ಕಡಿತ ಮಾಡಿ ಅದರಂತೆ ರಾಜ್ಯದ ಎಲ್ಲಾ ಪ್ರಾಂಶುಪಾಲರಿಗೆ ಉಲ್ಲೇಖಿತ ಸುತ್ತೋಲೆಯ ಮೂಲಕ ತಿಳಿಸಲಾಗಿದೆ. 2021ರ ದ್ವಿತೀಯ ಪಿಯುಸಿ ಪರೀಕ್ಷೆಗೆ ಹಾಜರಾಗುವ ಪುನರಾವರ್ತಿತ ಹಾಗೂ ಖಾಸಗಿಯಾಗಿ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳಿಗೂ ಸಹ ಇದು ಅನ್ವಯಿಸುತ್ತದೆ. ಈ ಮಾಹಿತಿಯನ್ನು ರಾಜ್ಯದ ಎಲ್ಲಾ ಜಿಲ್ಲೆಯ ಉಪನಿರ್ದೇಶಕರು ತಮ್ಮ ವ್ಯಾಪ್ತಿಯ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ತಿಳಿಸಲು ಸೂಚಿಸಿದೆ.

**ವಿಶೇಷ ಸೂಚನೆ** : ಈ ಪಠ್ಯವಸ್ತು ಕಡಿತವು 2020-21ನೇ ಶೈಕ್ಷಣಿಕ ವರ್ಷಕ್ಕೆ ಮಾತ್ರ ಅನ್ವಯಿಸುತ್ತದೆ. 2021-22ರ ಶೈಕ್ಷಣಿಕ ವರ್ಷದಿಂದ ಪಠ್ಯವಸ್ತುವಿನಲ್ಲಿ ಯಾವುದೇ ಕಡಿತವಿರುವುದಿಲ್ಲ.

Snehal

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ-ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ಹಾಗೂ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.